ಹುಬ್ಬಳ್ಳಿ - ಧಾರವಾಡದಲ್ಲಿ ಉದ್ದಿಮೆಗಳ ಕಾರ್ಮಿಕರಿಗಾಗಿ ಕಾರ್ಮಿಕರ ಬಡಾವಣೆ.

986 - ಶ್ರೀ ಅಶೋಕ್ ಕಾಟವೆ (ಹುಬ್ಬಳ್ಳಿ) : ಮಾನ್ಯ ಉಪ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ-ಧಾರವಾಡದಲ್ಲಿ ಉದ್ದಿಮೆಗಳು ಜಾಸ್ತಿ ಇದ್ದು, ಕಾರ್ಮಿಕರ ವಸತಿಗಾಗಿ ಕಾರ್ಮಿಕರ ಬಡಾವಣೆ ಪ್ರಾರಂಭಿಸಲು ಸರ್ಕಾರ ಯೋಚಿಸಿದೆಯೇ?

ಆ) ಹಾಗಿದ್ದಲ್ಲಿ ಎಷ್ಟು ಜಮೀನು ಈ ಉದ್ದೇಶಕ್ಕಾಗಿ ನಿಗದಿಪಡಿಸಲಾಗಿದೆ?

ಇ) ಹಾಗಿಲ್ಲದಿದ್ದಲ್ಲಿ, ಈ ಬಗ್ಗೆ ಪರಿಶೀಲನೆ ಕಾರ್ಯ ಕೈಗೆತ್ತಿಕೊಳ್ಳುವುದೇ?

ಈ) ಕಾರ್ಮಿಕರ ಮಕ್ಕಳಿಗಾಗಿ ಧಾರವಾಡ ಜಿಲ್ಲೆಯಲ್ಲಿ ಶಿಕ್ಷಣ, ಇತ್ಯಾದಿ ವಿಷಯಗಳ ಬಗ್ಗೆ ಸರ್ಕಾರ ಎಷ್ಟು ಹಣವನ್ನು ಪ್ರಸಕ್ತ ಸಾಲಿಗೆ ನಿಗದಿಪಡಿಸಿದೆ?

ಉ) ಹಾಗಿದ್ದಲ್ಲಿ ಎಂದಿನಿಂದ ಅಧಿಕೃತ ಪ್ರಕಟಣೆ ಹೊರಡಿಸಲಾಗುವುದು. ಹಾಗೂ ಈ ಕುರಿತು ಸರ್ಕಾರದವರು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)?

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಯವರು) :

ಅ) ಕಾರ್ಮಿಕ ಇಲಾಖೆಯ ಮುಂದೆ ಅಂತಹ ಯೋಜನೆ ಯಾವುದು ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹುಬ್ಬಳ್ಳಿ ನಗರಕ್ಕೆ ಖರ್ಚು ಮಾಡಿದ ಹಣ

987 - ಶ್ರೀ ಅಶೋಕ್ ಕಾಟವೆ (ಹುಬ್ಬಳ್ಳಿ) : ಮಾನ್ಯ ಪ್ರವಾಸೋದ್ಯಮ ಹಾಗೂ ಕನ್ನಡ ಮತ್ತು ಸಂಸ್ಕೃತಿ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1994-95ನೇ, 1995-96ನೇ ಸಾಲಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಹುಬ್ಬಳ್ಳಿ ನಗರಕ್ಕೆ ಖರ್ಚು ಮಾಡಿದ ಹಣವೆಷ್ಟು? ಹಾಗಿದ್ದಲ್ಲಿ ಕಾರ್ಯಕ್ರಮಗಳಾವುವು?

ಆ) ಹುಬ್ಬಳ್ಳಿ, ನಾಟ್ಯರಂಗದ ತವರೂರು ಹೀಗಿದ್ದು, ಕಲಾಭೂಮಿಕೆಗೆ ತಮ್ಮನ್ನೇ ತಾವು ಅರ್ಪಿಸಿಕೊಂಡಂತವರನ್ನು ಸರ್ಕಾರ ಗುರುತಿಸುವ ಕಲಾವಿದರ ಸಂಖ್ಯೆ ಎಷ್ಟು? ಯಾವ ಮಾನದಂಡದ ಮೇಲೆ ಅವರನ್ನು ಗುರುತಿಸಲಾಗುವುದು.